**ಸಾಕ್ಷಿಯನ್ನು ದಿಃ 27.05.2026 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದಃ**

3 ಔಷಧಿ ಪಾವತಿ ರಸೀದಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ. 19 ಎಂದು,

2 ಸಲಹಾ ಚೀಟಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ. 20 ಎಂದು,

ಕಲಂ 133 ರ ನೊಟೀಸ್ ಮತ್ತು ಉತ್ತರದ ಯಥಾ ನಕಲನ್ನು ಹಾಜರು ಪಡಿಸಿದ್ದು ಒಟ್ಟಾಗಿ ನಿಪಿ. 21 ಎಂದು ಗುರುತಿಸಲಾಯಿತು. ಆದುದರಿಂದ ನಾನು ಕೋರಿರುವಂತೆ ಅರ್ಜಿಯನ್ನು ಪುರಸ್ಕರಿಸಬೇಕಾಗಿ ಪ್ರಾರ್ಥಿಸುತ್ತೇನೆ.

**ಪಾಟೀ ಸವಾಲುಃ 2 ನೇ ಎದುರುದಾರರ ಪರ ವಕೀಲರಿಂದಃ**

2023 ರ ಬಿಲ್ಲನ್ನು 2023 ರಲ್ಲೇ ಪಾವತಿಸಿದ್ದು ವಕೀಲರಿಗೆ ನೀಡಲು ಮರೆತಿದ್ದೆ ಎನ್ನುತ್ತಾರೆ. ಆ ಪ್ರಮಾಣದಲ್ಲಿ ನಾನು ಔಷಧಿಗಾಗಿ ಖರ್ಚು ಮಾಡಿಲ್ಲ ಎಂದರೆ ಸರಿಯಲ್ಲ. ಹೆಚ್ಚಿನ ಪರಿಹಾರ ಪಡೆಯಲು ಐ.ಪಿ. ಬಿಲ್ಲನ್ನು ಸೃಷ್ಠಿಸಿ ಹಾಜರು ಪಡಿಸಿದ್ದೇನೆ ಎಂದರೆ ಸರಿಯಲ್ಲ. ಕಲಂ 133 ರ ಅಡಿಯ ನೋಟೀಸ್ ಹಾಗೂ ಉತ್ತರದಲ್ಲಿನ ವಿವರಗಳ ಬಗ್ಗೆ ನನಗೆ ಗೊತ್ತಿಲ್ಲ. ಅದನ್ನು ಯಾವಾಗ ನೀಡಿ ಉತ್ತರ ಪಡೆದುಕೊಂಡಿದ್ದಾರೆ ಎಂದು ನನಗೆ ಮಾಹಿತಿ ಇಲ್ಲ. ಈ ದಿನ ಹಾಜರು ಪಡಿಸಿರುವ ದಾಖಲೆಗಳನ್ನು ನಮಗೆ ಅನುಕೂಲ ಆಗಲಿ ಎಂದು ಸೃಷ್ಠಿಸಿ ಹಾಜರು ಪಡಿಸಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು

ಮತ್ತು ಎಂ.ಎ.ಸಿ.ಟಿ., ಮೈಸೂರು.